ಅರಣ್ಯ ಪ್ರದೇಶದ ಒತ್ತುವರಿ

102 (243) ಶ್ರೀ ಸುರೇಶ್ ಕುಮಾರ್ ಎಸ್. (ರಾಜಾಜಿನಗರ) ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಅರಣ್ಯ ಭೂಮಿ ಒತ್ತುವರಿ ವಿಚಾರಕ್ಕೆ ಸಂಬಂಧಪಟ್ಟಂತೆ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನ ಸಾರಂಶವೇನು; ಸುಪ್ರೀಂ ಕೋರ್ಟ್ ಎಂದು ತೀರ್ಪು ನೀಡಿದೆ;

ಆ) ಸುಪ್ರೀಂ ಕೋರ್ಟಿನ ತೀರ್ಪಿನ ವಿರುದ್ಧ ಮೇಲ್ಮನವಿ ಸಲ್ಲಿಸಲಾಗಿದೆಯೇ; ಇಲ್ಲದಿದ್ದಲ್ಲಿ, ಅದರ ಅಗತ್ಯತೆ ಕಂಡು ಬಂದಿಲ್ಲವೆ;

ಇ) ಸುಪ್ರೀಂ ಕೋರ್ಟಿನ ಆದೇಶದ ಪ್ರಕಾರ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಈ) ಸಣ್ಣ ಹಿಡುವಳಿದಾರರಿಗೆ ಭೂಮಿ ಮಂಜೂರು ಮಾಡುವ ವಿಚಾರದಲ್ಲಿ ಕ್ಯಾಬಿನೆಟ್ ಸಬ್ ಕಮಿಟಿ ಕೈಗೊಂಡಿರುವ ತೀರ್ಮಾನವೇನು?

ಶ್ರೀ ಕೆ.ಹೆಚ್. ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಅರಣ್ಯ ಭೂಮಿಗೆ ಸಂಬಂಧಿಸಿದಂತೆ ರಿಟ್ ಪಿಟಿಷನ್ ನಂ: 202/95ನ್ನು ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲು ಮಾಡಲಾಗಿದೆ. ಇದು 1980ರ ಫಾರೆಸ್ಟ್ ಕನ್ಸರ್ವೇಶನ್ ಕಾಯ್ದೆಗೆ ಸಂಬಂಧಿಸಿದೆ.

ಈ ರಿಟ್ ಅರ್ಜಿ ಕೆಳಗೆ ಅರಣ್ಯ ಭೂಮಿಯ ಒತ್ತುವರಿಗೆ ಸಂಬಂಧಪಟ್ಟ ಹಾಗೆ ಐ.ಎ. ನಂ: 703/2001 ಮತ್ತು ಐ.ಎ. ನಂ: 276/97ನ್ನು ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಿಸಲಾಗಿದೆ.

ಐ.ಎ. ನಂ: 703ರ ಮಧ್ಯಂತರ ಆದೇಶದಲ್ಲಿನ ಅತಿಕ್ರಮಣಗಳನ್ನು ಸಕ್ರಮಗೊಳಿಸುವುದನ್ನು ತಡೆ ಹಿಡಿಯುವಂತೆ ಸೂಚಿಸಿದೆ.

ಐ.ಎ. ನಂ: 276/1997 ಕರ್ನಾಟಕ ರಾಜ್ಯದ ಚಿಕ್ಕಮಗಳೂರು ಜಿಲ್ಲೆ ತತ್ಕೊಳ ಮೀಸಲು ಅರಣ್ಯ ಪ್ರದೇಶದ ಅತಿಕ್ರಮಣಕ್ಕೆ ಸಂಬಂಧಿಸಿದ್ದು ಸರ್ವೋಚ್ಚ ನ್ಯಾಯಾಲಯವು ಈ ಬಗ್ಗೆ ದಿನಾಂಕ: 30.10.2002ರ ಆದೇಶದಲ್ಲಿ ಈ ಅತಿಕ್ರಮಣಗಳನ್ನು ದಿನಾಂಕ: 30.1.2003ರ ಒಳಗೆ ತೆರವುಗೊಳಿಸಲು ಸೂಚಿಸಿದೆ

ಆ) ಐ.ಎ. ನಂ: 276/97ಕ್ಕೆ ಸಂಬಂಧಪಟ್ಟಂತೆ ಮೇಲ್ಮನವಿ ಸಲ್ಲಿಸಿರುವುದಿಲ್ಲ ಇದರ ಅಗತ್ಯತೆ ಕಂಡು ಬಂದಿಲ್ಲ.

ಇ) ಸರ್ವೋಚ್ಚ ನ್ಯಾಯಾಲಯವು ನೀಡಿರುವ ಐ.ಎ. ನಂ: 703 ಕ್ಕೆ ಸಂಬಂಧಿಸಿದ ಮಧ್ಯಂತರ ಆದೇಶ ಮತ್ತು ಐ.ಎ. ನಂ: 276ರ ಬಗ್ಗೆ ನೀಡಿರುವ ಅಂತಿಮ ಆದೇಶವನ್ನು ಪರಿಪಾಲಿಸಲಾಗುತ್ತಿದೆ. ಐ.ಎ. ನಂ.: 276ರ ಬಗ್ಗೆ ನೀಡಿರುವ ಆದೇಶದನ್ವಯ ಇದುವರೆಗೂ 528 ಎಕರೆ ಅರಣ್ಯ ಭೂಮಿಯನ್ನು ಒತ್ತುವರಿಯಿಂದ ತೆರವುಗೊಳಿಸಲಾಗಿದೆ.

ಈ) ವಿಷಯವು ಕ್ಯಾಬಿನೆಟ್ ಸಬ್ ಕಮಿಟಿಯ ಪರಿಶೀಲನೆಯಲ್ಲಿದೆ.

ಧೂಪದಾಳ್ ಜಲಾಶಯದ ಹಿನ್ನೀರಿನಲ್ಲಿ ದೊಡ್ಡ ನಡುಗಡ್ಡೆಯನ್ನು ಪ್ರವಾಸಿ ಕೇಂದ್ರವನ್ನಾಗಿ ಮಾಡುವುದು

104 (59) ಶ್ರೀ ಉಮೇಶ್ ವಿಶ್ವನಾಥ ಕತ್ತಿ (ಹುಕ್ಕೇರಿ) ಮಾನ್ಯ ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾಂವ ಜಿಲ್ಲೆ ಗೋಕಾಕ್ ತಾಲ್ಲೂಕಿನಲ್ಲಿ ಧೂಪದಾಳ್ ಜಲಾಶಯದ ಹಿನ್ನೀರಿನಲ್ಲಿ ಒಂದು ದೊಡ್ಡ ನಡುಗಡ್ಡೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಈ ಸ್ಥಳವನ್ನು ಪ್ರವಾಸೋದ್ಯಮ ಕೇಂದ್ರವನ್ನಾಗಿ ಮಾಡಿ ಕೇರಳ ರಾಜ್ಯದಲ್ಲಿರುವ ಕೋಕೋನೆಟ್ ಲಗೂನ್ ಮಾದರಿಯಲ್ಲಿ ಅಭಿವೃದ್ಧಿಪಡಿಸಲಾಗುವುದೇ?

ಇ) ಧೂಪದಾಳ್ ಜಲಾಶಯದ ಹಿನ್ನೀರಿನ ಈ ನಡುಗಡ್ಡೆಯನ್ನು ಪಕ್ಷಿಧಾಮ ಎಂದು ಘೋಷಿಸಲಾಗಿದೆಯೇ?

ಈ) ಈ ಸ್ಥಳವನ್ನು ಪ್ರವಾಸಿ ಕೇಂದ್ರವನ್ನಾಗಿ ಗುರುತಿಸಿ, ಪ್ರವಾಸಿ ಕೇಂದ್ರವನ್ನಾಗಿ ಅಭಿವೃದ್ಧಿ ಮಾಡಲು ಸರಕಾರ ಕ್ರಮ ತೆಗೆದುಕೊಳ್ಳುವುದೇ?

ಶ್ರೀ ಡಿ.ಬಿ. ಇನಾಂದಾರ್ (ಪ್ರವಾಸೋದ್ಯಮ ಮತ್ತು ಮಾಹಿತಿ ತಂತ್ರಜ್ಞಾನ ರಾಜ್ಯ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಇಲ್ಲ.

ಈ) ಇಲ್ಲ.

ಕಂದಾಯ ಗ್ರಾಮಗಳು

105 (381) ಶ್ರೀ ಉಮೇಶ್ ವಿಶ್ವನಾಥ್ ಕತ್ತಿ (ಹುಕ್ಕೇರಿ) ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಹುಕ್ಕೇರಿ ವಿಧಾನಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಕಾಟಾಬಳಿ, ಬೀರನಹೋಳಿ, ಜಾರಕಿಹೋಳಿ, ಕರೀಕಟ್ಟೆ ಹಾಗೂ ವಂಟಮುರಿ ಗ್ರಾಮಗಳಲ್ಲಿ ಮುಳುಗಡೆ ಪ್ರದೇಶದ ಜನರು ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಗ್ರಾಮಗಳನ್ನು ಕಂದಾಯ ಗ್ರಾಮವೆಂದು ಪರಿಗಣಿಸಲು ಸರ್ಕಾರ ಮಟ್ಟದಲ್ಲಿ ಯಾವುದೇ ಪ್ರಸ್ತಾವನೆ ಇದೆಯೇ?

ಇ) ಇಲ್ಲದಿದ್ದಲ್ಲಿ, ಕೂಡಲೇ ಈ ಗ್ರಾಮಗಳನ್ನು ಕಂದಾಯ ಗ್ರಾಮಗಳೆಂದು ಪರಿಗಣಿಸಲು ಸರ್ಕಾರ ಕ್ರಮ ಜರುಗಿಸುವುದೇ?

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) :

ಅ) ಹೌದು ಬಂದಿದೆ.

ಆ) ವಂಟಿಮುರಿ ಮತ್ತು ಬೀರನಹೋಳಿ ಗ್ರಾಮಗಳು ಕಂದಾಯ ಗ್ರಾಮಗಳಾಗಿದ್ದು, ಉಳಿದ ಕಾಟಾಬಳಿ, ಜಾರಕಿಹೋಳಿ, ಕರೀಕಟ್ಟೆ ಗ್ರಾಮಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಪ್ರಸ್ತಾವನೆ ಇರುವುದಿಲ್ಲ. ಕಾರಣ, ಈ ಗ್ರಾಮಗಳು ಸರ್ಕಾರದ ಅಳತೆಗೋಲಿನಡಿ ಅಂದರೆ 100 ಕುಟುಂಬ ಅಥವಾ 500 ಜನಸಂಖ್ಯೆಯನ್ನು ಹೊಂದಿರುವುದಿಲ್ಲ.

ಇ) ಈಗಿರುವ ಅಳತೆಗೋಲನ್ನು ಮಾದನಂಡವನ್ನು ಸಡಿಲಿಸಿ ಲಂಬಾಣಿ ತಾಂಡ, ಮಜರ್, ಹಟ್ಟಿ ಇತ್ಯಾದಿಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಬಗ್ಗೆ ಪರೀಶೀಲಿಸಲಾಗುತ್ತಿದೆ. ನಂತರ ಈ ಬಗ್ಗೆ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಂದ ಪ್ರಸ್ತಾನವನೆಯನ್ನು ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗುವುದು.